# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಉತ್ತರ ಕನ್ನಡ ಜಿಲ್ಲೆ, ಕಾರವಾರ ತಾಲ್ಲೂಕಿನ (1)ಗೋಟೆಗಾಳಿ ಮತ್ತು ಇತರೆ 22 ಗ್ರಾಮಗಳ (43 ಗುಂಪು ಜನವಸತಿಗಳ) ಹಾಗೂ (2)ಕೆರವಾಡಿ ಮತ್ತು ಇತರೆ 17 ಗ್ರಾಮಗಳ (42 ಗುಂಪು ಜನವಸತಿಗಳು) ಒಟ್ಟಾರೆ 386 ಜನವಸತಿಗಳ ಸಂಯೋಜಿತ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಗಳ ಪುನಃಶ್ಚೇತನ ಕಾಮಗಾರಿಯನ್ನು DBOT ಆಧಾರದ ಮೇಲೆ ಜಲ ಜೀವನ್ ಮಿಷನ್ ಕಾರ್ಯಕ್ರಮದಡಿ ಅನುಷ್ಠಾನಗೊಳಿಸಲು ಪರಿಷ್ಕೃತ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂ:ಗ್ರಾಕುನೀ&ನೈಇ 126 ಗ್ರಾನೀಸ(4)2022 ದಿನಾಂಕ:22.02.2022.
2. ದಿನಾಂಕ:09.09.2022ರ ಟೆಂಡರ್ ಅಂಗೀಕರಿಸುವ ಪ್ರಾಧಿಕಾರ(TAA) ಸಭೆಯ ನಡವಳಿಗಳು.
3. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆರವರ ಇ-ಆಫೀಸ್ ಕಡತ ಸಂ:ಗ್ರಾಕುನೀ&ನೈಇ/ತಾಂತ್ರಿಕ/38/2021.

---

**ಪೀಠಿಕೆ:**

ಉತ್ತರ ಕನ್ನಡ ಜಿಲ್ಲೆ, ಕಾರವಾರ ತಾಲ್ಲೂಕಿನ (1)ಗೋಟೆಗಾಳಿ ಮತ್ತು ಇತರೆ 22 ಗ್ರಾಮಗಳ (43 ಗುಂಪು ಜನವಸತಿಗಳ) ಹಾಗೂ (2)ಕೆರವಾಡಿ ಮತ್ತು ಇತರೆ 17 ಗ್ರಾಮಗಳ (42 ಗುಂಪು ಜನವಸತಿಗಳು) ಒಟ್ಟಾರೆ 386 ಜನವಸತಿಗಳ ಸಂಯೋಜಿತ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಗಳ ಪುನಃಶ್ಚೇತನ ಕಾಮಗಾರಿಯನ್ನು DBOT ಆಧಾರದ ಮೇಲೆ ಜಲ ಜೀವನ್ ಮಿಷನ್ ಕಾರ್ಯಕ್ರಮದಡಿ ಅನುಷ್ಠಾನಗೊಳಿಸಲು ಮೇಲೆ(1)ರಲ್ಲಿ ಓದಲಾದ ಆದೇಶದಲ್ಲಿ **ರೂ.88.50ಕೋಟಿಗಳಿಗೆ** ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಸದರಿ ಯೋಜನೆಯ ಟೆಂಡರ್ ಕಾಮಗಾರಿಯನ್ನು KTPP ನಿಯಮಾವಳಿಯನ್ವಯ ಟೆಂಡರ್ ಆಹ್ವಾನಿಸಲಾಗಿ ಕನಿಷ್ಠ ದರ ನಮೂದಿಸಿದ ಗುತ್ತಿಗೆದಾರರ ದರಗಳನ್ನು ಪರಿಗಣಿಸಿ, ಹಳೆಯ SR ದರಗಳನ್ನು ಪ್ರಸ್ತಾಪಿತ ಯೋಜನೆಗೆ ಸಚಿವ ಸಂಪುಟದ ಸಭೆಯ ನಿರ್ಣಯದಂತೆ 2021-22ನೇ ಸಾಲಿನ ಏಕರೂಪ ದರಪಟ್ಟಿಯನ್ವಯ ಮತ್ತು ಅನುಮೋದಿತ ಕೊಟೇಷನ್ ದರಗಳನ್ನು ಅಳವಡಿಸಿ ಪ್ರಾಥಮಿಕ ಯೋಜನಾ ವರದಿಯನ್ನು ತಯಾರಿಸಲಾಗಿದೆ. ಪ್ರಾಥಮಿಕ ಯೋಜನಾ ವರದಿಯಲ್ಲಿ ಏಕರೂಪ ದರಪಟ್ಟಿಗಳನ್ವಯ ಸ್ಟೀಲ್, ಸಿಮೆಂಟ್ ಮತ್ತು ಪೈಪ್‌ಗಳ ದರಗಳು ಕ್ರಮೇಣವಾಗಿ ಹೆಚ್ಚಾಗಿರುತ್ತದೆ ಮತ್ತು ದಿನಾಂಕ:18.03.2022ರ ಮತ್ತು ದಿನಾಂಕ:25.03.2022ರ 2021-22ನೇ ಸಾಲಿನ ಏಕರೂಪ ದರಪಟ್ಟಿಯನ್ವಯ CSR ದರಗಳಿಗೆ ಹೋಲಿಸಿದಾಗ ಟೆಂಡರ್ ಮೊತ್ತವು **ರೂ.120.00ಕೋಟಿಗಳಿಗೆ** ಪರಿಷ್ಕೃತಗೊಂಡಿರುತ್ತದೆ.

ಮೇಲೆ(2)ರಲ್ಲಿ ಓದಲಾದ ಟೆಂಡರ್ ಅಂಗೀಕರಿಸುವ ಪ್ರಾಧಿಕಾರ ಸಭೆಯಲ್ಲಿ ಮಂಡಿಸಲಾಗಿ, ಸಭೆಯ ಅನುಮತಿಯಂತೆ **ರೂ.120.00ಕೋಟಿಗಳ** ಪರಿಷ್ಕೃತ ಅಂದಾಜು ಮೊತ್ತದಲ್ಲಿ ಕಾಮಗಾರಿಯನ್ನು ಅನುಷ್ಠಾನಗೊಳಿಸಲು ಮೇಲೆ(3)ರಲ್ಲಿ ಓದಲಾದ ಕಡತದಲ್ಲಿ ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆರವರ ಪರಿಷ್ಕೃತ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಬೇಕೆಂದು ಕೋರಿರುತ್ತಾರೆ.

ಚಾಲ್ತಿ ಪಾರದರ್ಶಕ ನಿಯಮಾನುಸಾರ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್ **ಉತ್ತರ ಕನ್ನಡ** ಹಾಗೂ ಮುಖ್ಯ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರುರವರು ಮುಂದಿನ ಪ್ರಕ್ರಿಯೆಯನ್ನು ಅನುಸರಿಸಲು ಅನುವಾಗುವಂತೆ ಜಲ ಜೀವನ್ ಮಿಷನ್ ಕಾರ್ಯಕ್ರಮದಡಿ ಆಡಳಿತಾತ್ಮಕ ಅನುಮೋದನೆ ನೀಡಬೇಕಾಗಿದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಕುನೀ&ನೈಇ 126 ಗ್ರಾನೀಸ(4)2022 ಬೆಂಗಳೂರು, ದಿನಾಂಕ:28.10.2022.** 1744

ಪೀಠಿಕೆಯಲ್ಲಿನ ವಾಸ್ತವಾಂಶಗಳ ಹಿನ್ನೆಲೆಯಲ್ಲಿ, ಉತ್ತರ ಕನ್ನಡ ಜಿಲ್ಲೆ ಕಾರವಾರ ತಾಲ್ಲೂಕಿನ (1)ಗೋಟೆಗಾಳಿ ಮತ್ತು ಇತರೆ 22 ಗ್ರಾಮಗಳ (43 ಗುಂಪು ಜನವಸತಿಗಳ) ಹಾಗೂ (2)ಕೆರವಾಡಿ ಮತ್ತು ಇತರೆ 17 ಗ್ರಾಮಗಳ (42 ಗುಂಪು ಜನವಸತಿಗಳು) ಒಟ್ಟಾರೆ 386 ಜನವಸತಿಗಳ ಸಂಯೋಜಿತ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಗಳ ಪುನಃಶ್ಚೇತನ ಕಾಮಗಾರಿಯನ್ನು DBOT ಆಧಾರದ ಮೇಲೆ ಜಲ ಜೀವನ್ ಮಿಷನ್ ಕಾರ್ಯಕ್ರಮದಡಿ ಅನುಷ್ಠಾನಗೊಳಿಸಲು ಪರಿಷ್ಕೃತ ಅಂದಾಜು ಮೊತ್ತ **ರೂ.120.00ಕೋಟಿ (ಒಂದು ನೂರ ಇಪ್ಪತ್ತು ಕೋಟಿ ರೂಪಾಯಿಗಳು ಮಾತ್ರ) ಗಳ** ಅಂದಾಜಿನಲ್ಲಿ 5 ವರ್ಷಗಳ ಕಾರ್ಯಾಚರಣೆ ಮತ್ತು ನಿರ್ವಹಣೆ ಬಾಬ್ತು ಸೇರಿದಂತೆ ಕೇಂದ್ರ ಪುರಸ್ಕೃತ ಜಲ ಜೀವನ್ ಮಿಷನ್ ಕಾರ್ಯಕ್ರಮದಡಿ ಅನುಷ್ಠಾನಗೊಳಿಸಲು ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

**2. ಈ ಆದೇಶವು ಕೆಳಕಂಡ ಷರತ್ತುಗಳಿಗೆ ಒಳಪಟ್ಟಿರುತ್ತದೆ.**

ಅ) ಈ ಅನುಮೋದಿತ ಕುಡಿಯುವ ನೀರಿನ ಯೋಜನೆಯ ವ್ಯಾಪ್ತಿಗೆ ಬರುವ ಹಳ್ಳಿ / ಜನವಸತಿಗಳು ಮತ್ತ್ಯಾವುದೇ ಯೋಜನೆಗಳಡಿ ಸೇರ್ಪಡೆಯಾಗಿರಬಾರದು.

ಆ) ಈ ಯೋಜನೆಯ **DBOT** ಟೆಂಡರ್‌ನ್ನು KTPP ಪಾರದರ್ಶಕ ನಿಯಮಗಳನ್ನು ಅನುಸರಿಸಿ ಅದರಂತೆ ಕ್ರಮವಹಿಸತಕ್ಕದ್ದು.

ಇ) ಟೆಂಡರ್ ಅವಾರ್ಡ್ ಮಾಡುವ ಮೊದಲು ಅಗತ್ಯವಿರುವ ಅನುದಾನವನ್ನು ಲಭ್ಯತೆ ಮಾಡಿಕೊಂಡು ಕ್ರಿಯಾ ಯೋಜನೆಯಲ್ಲಿ ಅಳವಡಿಸಿದ ನಂತರ ನಿಯಮಾನುಸಾರ ಮುಂದಿನ ಕ್ರಮವಹಿಸುವುದು.

ಈ) ಈ ಯೋಜನೆಯ ಅನುಷ್ಠಾನ ಮತ್ತು ಅನುದಾನ ವಿನಿಯೋಗದಲ್ಲಿ ಅನುಮೋದಿತ ಟೆಂಡರ್ ಮೊತ್ತ ಮೀರಿ ಹೆಚ್ಚಳವಾಗದಂತೆ ಅನುಷ್ಠಾನ ಅಧಿಕಾರಿಗಳು ನಿಗಾವಹಿಸಿ ಪ್ರಚಲಿತ ನಿಯಮಗಳನುಸಾರ ಅಗತ್ಯವಿರುವ ನಿಬಂಧನೆಗಳನ್ನು ಅಳವಡಿಸಿಕೊಂಡು ಸೂಕ್ತ ರೀತಿಯಲ್ಲಿ ಒಡಂಬಡಿಕೆ – ಕರಾರುಗಳನ್ನು ಮಾಡಿಕೊಳ್ಳತಕ್ಕದ್ದು.

ಉ) ಯಶಸ್ವಿ ಗುತ್ತಿಗೆದಾರರು ಕಾಮಗಾರಿಯನ್ನು ಉತ್ತಮ ಗುಣಮಟ್ಟದಲ್ಲಿ ಪೂರ್ಣಗೊಳಿಸಿ ಕಾರ್ಯಗತಗೊಳಿಸಬೇಕು. ತದನಂತರ **5** ವರ್ಷಗಳ ಕಾಲ ಸದರಿ ಯೋಜನೆಯ ಸಂಪೂರ್ಣ ನಿರ್ವಹಣೆ ಹಾಗೂ ಕಾರ್ಯಾಚರಣೆ ಜವಾಬ್ದಾರಿಯನ್ನು (ವಿದ್ಯುತ್ ಶುಲ್ಕ ಹೊರತುಪಡಿಸಿ) ಸದರಿ ಸಂಸ್ಥೆ ನಿರ್ವಹಿಸತಕ್ಕದ್ದು.

ಊ) ಯೋಜನಾ ವ್ಯಾಪ್ತಿಯ ಜನವಸತಿಗಳಿಗೆ 55 LPCD ನೀರನ್ನು ಒದಗಿಸುವುದು. ಯಾವುದೇ ಕಾರಣಕ್ಕೂ ಅನುಮೋದಿತ ಯೋಜನಾ ಅಂದಾಜು ವೆಚ್ಚದಲ್ಲಿ ಹೆಚ್ಚಳವಾದಲ್ಲಿ ಗುತ್ತಿಗೆದಾರರೇ ಅಂತಹ ಹೆಚ್ಚಳ ಭರಿಸತಕ್ಕದ್ದು.

ಋ)ಗುತ್ತಿಗೆದಾರರು ಸಿದ್ಧಪಡಿಸುವ ಡಿ.ಪಿ.ಆರ್‌ಗೆ ಮುಖ್ಯ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಬೆಂಗಳೂರು ರವರ ಹಂತದಲ್ಲಿರುವ **DBOT** ತಾಂತ್ರಿಕ ಸಮಿತಿ, ತಾಂತ್ರಿಕ ಸಿಂಧುತ್ವವನ್ನು ಪರಿಶೀಲಿಸಿ ದೃಢೀಕರಿಸಬೇಕು. ಹೀಗೆ ದೃಢೀಕರಿಸುವಾಗ ವಾಸ್ತವಿಕವಾಗಿ ಅಗತ್ಯವಿರುವ ಪ್ರಮಾಣದ ಶುದ್ಧ ಕುಡಿಯುವ ನೀರಿನ ಪೂರೈಕೆ ವ್ಯವಸ್ಥೆಗೆ ಅಗತ್ಯವಿರುವ ಎಲ್ಲಾ ತಾಂತ್ರಿಕ ವಿನ್ಯಾಸಗಳು ಮತ್ತು ಕಾಮಗಾರಿಗಳು ಪೂರಕವಾಗಿರುವುದನ್ನು ದೃಢಪಡಿಸಿಕೊಳ್ಳಬೇಕು.

ಎ) ಈ ಯೋಜನೆಯ ಕಾಮಗಾರಿಯನ್ನು 18 ತಿಂಗಳ ಕಾಲಮಿತಿಯೊಳಗೆ ಅನುಷ್ಠಾನಗೊಳಿಸತಕ್ಕದ್ದು. ಯಾವುದೇ ವಿಳಂಬಕ್ಕೆ ಅವಕಾಶವೀಯ ಕೂಡದು ಯೋಜನೆಯ ಘಟಕದಲ್ಲಿನ ಸಾಮಗ್ರಿಗಳ ಬೆಲೆ ಹೆಚ್ಚಳಕ್ಕೆ ಅವಕಾಶವಿರುವುದಿಲ್ಲ. ಬಲ್ಕ್‌ವಾಟರ್ ಮೀಟರ್‌ಗಳನ್ನು ಎಲ್ಲಾ ಜನವಸತಿಗಳ OHT ಬಳಿ ಅಳವಡಿಸತಕ್ಕದ್ದು.

ಏ) ಯೋಜನಾ ಅಂದಾಜು ಮೊತ್ತದ ಕನಿಷ್ಠ **10%**ನ್ನು ಯೋಜನೆ ಕಾರ್ಯಗತಗೊಳಿಸಿ ತೃಪ್ತಿಕರ **O&M** ವ್ಯವಸ್ಥೆ ನಿರೂಪಿಸುವ ಕಾರ್ಯಕ್ಷಮತೆ ಆಧರಿಸಿ ನಂತರ ಗುತ್ತಿಗೆದಾರರಿಗೆ ಪಾವತಿಸಬೇಕು.

ಐ) ಈ ಯೋಜನೆಯ ಮುಖ್ಯ ಕಾಮಗಾರಿಗಳನ್ನು ಅನುಷ್ಠಾನಗೊಳಿಸಿದ ನಂತರ, ಅವುಗಳ ಗುಣಮಟ್ಟ ಮತ್ತು ಕಾರ್ಯಕ್ಷಮತೆ ಮತ್ತು **PMC** ವರದಿ ಆಧರಿಸಿ ಅನುಮೋದಿತ **ToR** ಹಾಗೂ ಟೆಂಡರ್ ಕರಾರಿನಂತೆ ನಿಯಮಾನುಸಾರ ಬಿಲ್ ಪಾವತಿಸಲು ಅನುಷ್ಠಾನಾಧಿಕಾರಿಗಳು ಹಾಗೂ ಮುಖ್ಯ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಬೆಂಗಳೂರು ರವರು ಕ್ರಮವಹಿಸಬೇಕು. ಕಾಮಗಾರಿಯ ಕಾಲಕಾಲಿಕ ಪ್ರಗತಿ ಮತ್ತು ಗುಣಮಟ್ಟ ಪರಿಶೀಲಿಸಿ ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಗೆ ವರದಿ ಮಾಡತಕ್ಕದ್ದು.

ಒ) ಈ ಯೋಜನೆಯ ವಿನ್ಯಾಸದ ಕಾರ್ಯಸಿಂಧುತ್ವ ಪರಿಶೀಲಿಸುವುದು, ಕಾಲಮಿತಿಯೊಳಗೆ ಯೋಜನೆ ಅನುಷ್ಠಾನಗೊಳಿಸುವುದು ಮತ್ತು ಯೋಜನೆಯ ಕಾಮಗಾರಿಗಳ ಗುಣಮಟ್ಟ ಪರಿವೀಕ್ಷಣೆ ಸಲುವಾಗಿ ಅಗತ್ಯವಿರುವ ಯೋಜನಾ ಉಸ್ತುವಾರಿ ಘಟಕವನ್ನು ಟೆಂಡರ್ ಮುಖೇನ ಗೊತ್ತುಪಡಿಸಿ, ಸರ್ಕಾರದ ಅನುಮೋದನೆ ಪಡೆಯಲು ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಜರೂರಾಗಿ ಕ್ರಮವಹಿಸತಕ್ಕದ್ದು.

ಓ) ಮೇಲ್ಕಂಡ ಅನುಮೋದಿತ ಮೊತ್ತ **DBOT** ತಾಂತ್ರಿಕ ಸಮಿತಿ ದೃಢೀಕರಿಸುವ ಯೋಜನೆಯ ಮುಖ್ಯ ಕಾಮಗಾರಿಗಳ ವಾಸ್ತವಿಕ ಅಂದಾಜು ಮೊತ್ತದ ನಿಬಂಧನೆಗೊಳಪಟ್ಟಿರುತ್ತದೆ. ಅಂತೆಯೇ, ಅನುಮೋದಿತ ಸಂಸ್ಥೆಯೊಡನೆ **MoU**/ಕರಾರು ಪತ್ರ ಮಾಡಿಕೊಳ್ಳುವ ಮೊದಲು ಗರಿಷ್ಠ ಮಿತವ್ಯಯ ಅಳವಡಿಸಿ, ಸರ್ಕಾರದ ಅನುಮತಿ ಪಡೆದು ಯೋಜನೆಯ ಅನುಷ್ಠಾನ ಕುರಿತು ಮುಖ್ಯ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಬೆಂಗಳೂರು ರವರು ಮುಂದಿನ ಕ್ರಮವಹಿಸತಕ್ಕದ್ದು.

3. ಈ ಆದೇಶವನ್ನು **ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 592 ವೆಚ್ಚ-6 2022 ದಿನಾಂಕ:30.09.2022**ರ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ನಿರ್ದೇಶಕರು
ಹಾಗೂ ಪದನಿಮಿತ್ತ ಉಪ ಕಾರ್ಯದರ್ಶಿ,
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ.

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ –AG/A&E) ಕರ್ನಾಟಕ, ಬೆಂಗಳೂರು.

2. ಮಹಾಲೇಖಪಾಲರು (ಎಯು–I – G&SSA- AUDIT) ಕರ್ನಾಟಕ, ಬೆಂಗಳೂರು.
3. ಅಧ್ಯಕ್ಷರು, ಜಿಲ್ಲಾ ಪಂಚಾಯತ್, **ಉತ್ತರ ಕನ್ನಡ.**
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಇವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಜಲಸಂಪನ್ಮೂಲ, ವಿಕಾಸ ಸೌಧ ಬೆಂಗಳೂರು
6. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾ.ಅ. ಮತ್ತು ಪಂ. ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
7. ಮುಖ್ಯ ಇಂಜಿನಿಯರ್, ಗ್ರಾ.ಕು.ನೀ.&.ನೈ. ಇಲಾಖೆ, ಬೆಂಗಳೂರು ಇವರಿಗೆ ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ.
8. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್ ಸಾಬ್ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು
9. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, **ಉತ್ತರ ಕನ್ನಡ.**
10. ಅಧೀಕ್ಷಕ ಅಭಿಯಂತರರು, ಗ್ರಾ.ಕು.ನೀ.&.ನೈ. ವೃತ್ತ ಕಛೇರಿ, **ಧಾರವಾಡ.**
11. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ. ಮತ್ತು ಪಂ. ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
12. ಸಂಪಾದಕರು, "ಕರ್ನಾಟಕ ವಿಕಾಸ", ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು.
13. ಮುಖ್ಯ ಲೆಕ್ಕಾಧಿಕಾರಿ, ಗ್ರಾ.ಕು.ನೀ.&ನೈ.ಇ., ಕಾವೇರಿ ಭವನ, ಬೆಂಗಳೂರು.
14. ಕಾರ್ಯಪಾಲಕ ಅಭಿಯಂತರರು, ಗ್ರಾ.ಕು.ನೀ.&.ನೈ. ವಿಭಾಗ, **ಕಾರವಾರ.**
15. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾ.ಅ.&.ಪಂ.ರಾಜ್ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು).
16. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ).
17. ಗ್ರಾ.ಅ.ಪಂ.ರಾಜ್ ಇಲಾಖೆಯ ಮಾಹಿತಿ ಕೇಂದ್ರ (10 ಪ್ರತಿಗಳು).
18. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.